ಹಾಸನದ ಹಾಲಿನ ಡೈರಿ ಮತ್ತು ಒಕ್ಕೂಟಗಳಲ್ಲಿ ನಡೆದಿರುವ ನ್ಯೂನ್ಯತೆ ಮತ್ತು ಅಕ್ರಮಗಳ ಬಗ್ಗೆ

೮೫. ಶ್ರೀ ಕೆ.ಹೆಚ್. ಹನುಮೇಗೌಡ (ಹಾಸನ).— ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಪಶು.ಸಂಗೋಪನೆ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹಾಸನದ ಹಾಲಿನ ಡೈರಿ ಹಾಗೂ ಯೂನಿಯನ್‌ಗಳಲ್ಲಿ ನಡೆದಿರುವ ನ್ಯೂನತೆ ಮತ್ತು ಅಕ್ರಮಗಳು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಾದಲ್ಲಿ, ಸರ್ಕಾರದವರು ಸಹಕಾರ ಸಂಘಗಳ ನಿಯಮ ಪ್ರಕಾರ ವಿಚಾರಣೆ ಮಾಡಲು ತೆಗೆದುಕೊಂಡ ಕ್ರಮಗಳೇನು?

ಶ್ರೀ ಬಿ. ಬಸವಲಿಂಗಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಪಶು ಸಂಗೋಪನಾ ಸಚಿವರು).—

ಅ) ಹೌದು

ಆ) ಈ ಬಗ್ಗೆ ಸಹಕಾರ ಸಂಘಗಳ ಕಾಯ್ದೆ ೧೯೫೯ರ ಸೆಕ್ಷನ್ ೬೪ರನ್ವಯ ಸಹಕಾರ ಸಂಘಗಳ ನಿಬಂಧಕರ ದಿನಾಂಕ ೧೭-೪-೮೯ರ ಆದೇಶ ಸಂಖ್ಯೆ. ಡೇ. ೧೮೨. ಜಿ. ಜೆಎಂಸಿ. ೮೮-೮೯ರ ಮೂಲಕ ವಿಚಾರಣೆಯನ್ನು ಆದೇಶಿಸಿ ಸಹಕಾರ ಸಂಘಗಳ ಜಂಟಿ ನಿಬಂಧಕರು ಮೈಸೂರು ವಿಭಾಗ ಮೈಸೂರು ಇವರನ್ನು ವಿಚಾರಣಾ ಅಧಿಕಾರಿಯಾಗಿ ನೇಮಿಸಲಾಗಿದೆ. ಅವರು ವಿಚಾರಣೆ ನಡೆಸಿ ಸಹಕಾರಿ ಸಂಘಗಳ ನಿಬಂಧಕರಿಗೆ ವರದಿ ಸಲ್ಲಿಸಿರುತ್ತಾರೆ. ಸಹಕಾರ ಸಂಘಗಳ ನಿಬಂಧಕರು ಸೂಕ್ತ ಶಿಫಾರಸ್ಸಿನೊಂದಿಗೆ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯದ ಆಸ್ಪತ್ರೆಯಲ್ಲಿ ಹಿರಿಯ ಪ್ರಾಧ್ಯಾಪಕರು ಅನಧಿಕೃತ ಗೈರು ಹಾಜರಿಯ ಬಗ್ಗೆ

೭೭೧. ಶ್ರೀ ಎಂ. ರಾಮಪ್ಪ (ಬಳ್ಳಾರಿ).— ಮಾನ್ಯ ಆರೋಗ್ಯ, ಕುಟುಂಬ ಕಲ್ಯಾಣ ಮತ್ತು ಸಹಕಾರ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯದ ಆಸ್ಪತ್ರೆಯಲ್ಲಿ ಕೆಲವೊಂದು ಹಿರಿಯ ಪ್ರಾಧ್ಯಾಪಕರು, ಕೆಲವು ತಿಂಗಳುಗಳಿಂದ ಅನಧಿಕೃತ ಗೈರು ಹಾಜರಿಯಲ್ಲಿದ್ದು ಸಂಬಳವನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ?

ಆ) ಹಾಗಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಅಕ್ರಮವಾಗಿ ಅನ್ಯಾಯವಾಗಿ ಸಂಬಳವನ್ನು ಪಡೆದಿರುವುದಕ್ಕೆ ಸರ್ಕಾರವು ಕ್ರಮ ತೆಗೆದುಕೊಂಡಿದ್ದಾದರೂ ಏನು?

ಶ್ರೀಮತಿ ಮನೋರಮಾ ಮಧ್ವರಾಜ್ (ಆರೋಗ್ಯ, ಕುಟುಂಬ ಕಲ್ಯಾಣ ಮತ್ತು ಸಹಕಾರ ಸಚಿವರು).—

ಅ) ಹೌದು.

ಆ) ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕ್ರಮ ಕೈಗೊಂಡಿದೆ.

ಬಳ್ಳಾರಿ ವೈದ್ಯಕೀಯ ವಿದ್ಯಾಲಯದಲ್ಲಿ ಕಾರ್ಡಿಯೋ ಥೋರಾಸಿಕ್ ಸರ್ಜರಿ ವಿಭಾಗದಲ್ಲಿ ಪ್ರತ್ಯೇಕವಾಗಿ ವಾರ್ಡನ್ನು ನೀಡುವ ಬಗ್ಗೆ

೭೭೯. ಶ್ರೀ ಎಂ. ರಾಮಪ್ಪ (ಬಳ್ಳಾರಿ).— ಮಾನ್ಯ ಆರೋಗ್ಯ, ಕುಟುಂಬ ಕಲ್ಯಾಣ ಮತ್ತು ಸಹಕಾರ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಳ್ಳಾರಿ ವೈದ್ಯಕೀಯ ವಿದ್ಯಾಲಯದಲ್ಲಿ ಕಾರ್ಡಿಯೋ ಥೊರಾಸಿಕ್ ಸರ್ಜರಿ ವಿಭಾಗಕ್ಕೆ ವಾರ್ಡನ್ನು ಪ್ರತ್ಯೇಕವಾಗಿ ಈ ಹಿಂದೆಯೇ ಮಂಜೂರಾತಿ ನೀಡಿರುವುದು ನಿಜವಲ್ಲವೇ?